ಮೈಸೂರ ಗೆಜೆಟ್.

ಸಂ. 44.] ಸರ್ಕಾರದಿಂದ ಪ್ರಾಯುಷ್ ಆದ್ದು [ನಂ. 13.

ಬೆಂಗಳೂರು, ಗುರುವಾರ, ಏಪ್ರೆಲ್ ತಾ॥ 1, ಸನ್ 1909.

II ನೆ ಭಾಗ.

ಇಂಡ್ಯಗವರ್ನ್‌ಮೆಂಟ್, ರೆಸಿಡೆಂಟರು, ಚೀಫ್ ಜಡ್ಜ್‌ರು ಮೆಯ್ರೆರೀರಿಂದ ಕೊಡೋಣಾದ ಇಸ್ತಿಹಾರ್‌ನಾಮೆಗಳು.

ಫೈನ್ಯಾನ್ಷಿಯಲ್ ಇಲಾಖಾ.

ತಾರೀಖು 26ನೆ ಫೆಬ್ರವರಿ 1909.

1909ನೆ ಇಸವಿ ಏಪ್ರೆಲ್ 1ನೆ ತಾರೀಖು ಲಾಗಾಯಿತು 1909ನೆ ಇಸವಿ ಜೂನ್ 30ರ ವರೆಗೆ ಕೆಳಗೆ ನಮೂದಿಸಿರುವ ಖಜಾನೆಗಳ ಮೇಲೆ ಹುಂಡಿಗಳಿಗೆ (Supply Bills) ಅಪ್ಲಿಕೇಷ್ಣಗಳನ್ನು ಮೈಸೂರು ಸೀಮೆಯು ಶ್ರೀಮನ್ ಮಹಾರಾಜರವರ ಸರ್ಕಾರದ ಕಂಟ್ರೋಲರು ತೆಗೆದುಕೊಳ್ಳುತ್ತಾರೆ. ಪ್ರತಿಯೊಂದು ಅಪ್ಲಿಕೇಷ್ಣನಲ್ಲಿಯೂ ಈ ಕೆಳಗೆ ತೋರಿಸಿರುವ ವಿವರಗಳು ಇರಬೇಕು.

1. ಹುಂಡಿ ಮೊಬಲಗು.
2. ಹಣ ಪಾವತಿಯಾಗಬೇಕಾದ ಖಜಾನೆಯ ಹೆಸರು.

ಮತ್ತು 3. ಹುಂಡಿಗೆ ಅಪ್ಲಿಕೇಷ್ಣ ಹಾಕುವವರ ಹೆಸರು ಮತ್ತು ವಿಳಾಸ.

2. 500 ರೂಪಾಯಿಗಳಿಗಿಂತ ಕಡಿಮೆ ಮೊಬಲಗಿಗೆ ಹುಂಡಿಯು ಕೊಡಲ್ಪಡುವದಿಲ್ಲ.

3. ಅಪ್ಲಿಕೇಷನ್ನು ಅಂಗೀಕರಿಸುವ ಪಕ್ಷದಲ್ಲಿ ಆ ವಿಚಾರವು ಅಪ್ಲಿಕೇಷ್ಣ ಹಾಕಿರುವವರಿಗೆ ತಿಳಿಸಲ್ಪಡುವದಲ್ಲದೆ, ಸ್ಪೇಷ್ ಹುಜೂರು ಟ್ರೆಜರಿ ಆಫಿಸರಿಗೆ ಹುಂಡಿಯ ಮೊಬಲಗನ್ನು ಮತ್ತು ಕೆಳಗೆ ನಮೂದಿಸಿರುವ ದರದಮೇರೆ ಕಮಿಷನನ್ನೂ ತೆಗೆದುಕ್ಕೊಂಡು ಹುಂಡಿಯನ್ನು ಕೊಡುವದಕ್ಕೆ ಅಧಿಕಾರವು ಕೊಡಲ್ಪಡುತ್ತದೆ.

ಹುಂಡಿ ಕೊಡುವ ಖಜಾನೆ ಹೆಸರು.	ಹಣ ಪಾವತಿಯಾಗಬೇಕಾದ ಖಜಾನೆ ಹೆಸರು.	ಕಮಿಷರ್ಷ ದರ.
ಸ್ಪೇಷ್ ಹುಜೂರ್.	ಕೋಲಾರ. ತುಮಕೂರು. ಶಿವಮೊಗ್ಗ. ಕಡೂರು. ಚಿತ್ರದುರ್ಗ. ಮೈಸೂರು. ಹಾಸನ.	ಕೇಕಡ $\frac{1}{16}$

ಜೆ. ಎಸ್. ಚಕ್ರವರ್ತಿ,
ಕಂಟ್ರೋಲರ್.